**Akashvani : Bangalore**
**National Bulletin In Kannada**
**04.03.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**04.03.2025 / 19.35 hrs**

**<><*<><>*><>**

## ಮುಖ್ಯಾಂಶಗಳು

**೧. ಸುಸ್ಥಿರ ಅಭಿವೃದ್ಧಿಗಾಗಿ ಸಂಪನ್ಮೂಲಗಳ ಸಮರ್ಥ ನಿರ್ವಹಣೆ ಅಗತ್ಯ- ರಾಷ್ಟ್ರಪತಿ ದ್ರೌಪದಿ ಮುರ್ಮು**

**೨. ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮಾವೇಶ; ಜವಾಬ್ದಾರಿಗಳನ್ನು ಪಾರದರ್ಶಕವಾಗಿ ಪೂರೈಸಲು ಮುಖ್ಯ ಚುನಾವಣಾ ಆಯುಕ್ತರ ಕರೆ**

**೩. ನವದೆಹಲಿಯಲ್ಲಿಂದು ೪ನೇ ಅಂತಾರಾಷ್ಟ್ರೀಯ ಆಹಾರ ಮತ್ತು ಆತಿಥ್ಯ ಮೇಳಕ್ಕೆ ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಚಾಲನೆ**

**೪. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್; ಸೆಮಿಫೈನಲ್‌ನಲ್ಲಿ ಭಾರತಕ್ಕೆ ೨೬೫ ರನ್ ಗಳ ಗೆಲುವಿನ ಗುರಿ ನೀಡಿದ ಆಸ್ಟ್ರೇಲಿಯಾ**

**<><*<><>*><>**

ಸುಸ್ಥಿರ ಮತ್ತು ಎಲ್ಲರನ್ನೂ ಒಳಗೊಳ್ಳುವ ಅಭಿವೃದ್ಧಿಗಾಗಿ ಸಂಪನ್ಮೂಲಗಳನ್ನು ಸಮರ್ಥವಾಗಿ ಹಾಗೂ ನ್ಯಾಯಯುತವಾಗಿ ನಿರ್ವಹಿಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರಪತಿ ಭವನದಲ್ಲಿಂದು ಭಾರತೀಯ ಕಂದಾಯ ಸೇವೆಯ ಪ್ರಶಿಕ್ಷಣಾರ್ಥಿ ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಅವರು, ದೇಶದ ಮೂಲಸೌಕರ್ಯ ಬೆಳೆಯುತ್ತಿದ್ದು, ಡಿಜಿಟಲ್ ಸಂಪರ್ಕವು ಅಂತರವನ್ನು ಕಡಿಮೆ ಮಾಡುತ್ತಿದೆ ಮತ್ತು ಆರ್ಥಿಕ ಅವಕಾಶಗಳು ಹಿಂದೆಂದಿಗಿಂತಲೂ ಹೆಚ್ಚು ಸುಲಭವಾಗಿ ಲಭ್ಯವಾಗುತ್ತಿವೆ ಎಂದು ತಿಳಿಸಿದರು. ಆಡಳಿತ ಮತ್ತು ದೇಶದ ಅಭಿವೃದ್ಧಿಯಲ್ಲಿ ಭಾರತೀಯ ಕಂದಾಯ ಸೇವಾ ಅಧಿಕಾರಿಗಳ ಪಾತ್ರ ಪ್ರಮುಖವಾಗಿದ್ದು, ಅಗತ್ಯ ಸಂಪನ್ಮೂಲವನ್ನು ನ್ಯಾಯಯುತ, ಪರಿಣಾಮಕಾರಿ ಮತ್ತು ಪಾರದರ್ಶಕ ರೀತಿಯಲ್ಲಿ ಕ್ರೋಡೀಕರಿಸುವುದನ್ನು ಖಚಿತಪಡಿಸಿಕೊಳ್ಳುವಲ್ಲಿ ಇವರು ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ರಾಷ್ಟ್ರಪತಿ ಹೇಳಿದರು. ಬದಲಾಗುತ್ತಿರುವ ಕಾಲ, ಬೆಳೆಯುತ್ತಿರುವ ನಿರೀಕ್ಷೆಗಳು ಮತ್ತು ಸರ್ಕಾರಿ ಉಪಕ್ರಮಗಳು, ಹೆಚ್ಚಿನ ದಕ್ಷತೆ, ಪಾರದರ್ಶಕತೆ ಮತ್ತು ಅನುಕೂಲತೆಯ ಹೊಸ ಯುಗಕ್ಕೆ ನಾಂದಿ ಹಾಡಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

**<><*<><>*><>**

ದೇಶದಲ್ಲಿ ತಯಾರಿಕೆ ಮತ್ತು ರಫ್ತು ವಲಯಕ್ಕೆ ಹೆಚ್ಚಿನ ಒತ್ತು ನೀಡಲು ಕೇಂದ್ರ ಸರ್ಕಾರ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಈ ನಿಟ್ಟಿನಲ್ಲಿ ರೂಪಿಸಲಾದ ಕೇಂದ್ರದ ಬಜೆಟ್‌ನಲ್ಲಿ ಎಲ್ಲಾ ವಲಯಗಳಿಗೆ ಆದ್ಯತೆ ಮೇಲೆ ಯೋಜನೆಗಳನ್ನು ಜಾರಿಗೊಳಿಸಲು ತೀರ್ಮಾನಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರದ ಬಜೆಟ್ ನಂತರ ಆಯೋಜಿಸಲಾಗಿರುವ ಎಂಎಸ್‌ಎಂಇ ವಲಯ ಕುರಿತ ವೆಬಿನಾರ್‌ನಲ್ಲಿ ವಿಡಿಯೊ ಕಾನ್ಫರೆನ್ಸ್ ಮೂಲಕ ಭಾಗಿಯಾಗಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಕೇಂದ್ರದ ಬಜೆಟ್‌ನಲ್ಲಿ ಹಣಕಾಸು ಶಿಸ್ತು ಕಾಪಾಡಿಕೊಳ್ಳುವುದರ ಜೊತೆಗೆ ಪಾರದರ್ಶಕತೆಗೆ ವಿಶೇಷ ಆದ್ಯತೆ ನೀಡಲಾಗಿದೆ. ಎಲ್ಲರನ್ನೂ ಒಳಗೊಂಡ ಅಭಿವೃದ್ಧಿ ಸಾಧಿಸಲು ಕಾರ್ಯಕ್ರಮ ರೂಪಿಸಲಾಗಿದೆ ಎಂದರು. ಆದಾಯ ತೆರಿಗೆ ನೀತಿಗಳನ್ನು ಸರಳೀಕರಣಗೊಳಿಸಲಾಗಿದೆ. ಜನಸ್ನೇಹಿ ವಾತಾವರಣ ನಿರ್ಮಾಣ ಮಾಡಲಾಗಿದೆ. ಜಾಗತಿಕ ರಫ್ತು ಸಂಬಂಧಿತ ಪೂರೈಕೆ ಸರಪಳಿಯನ್ನು ನಿರಂತರವಾಗಿ ಕಾಯ್ದುಕೊಂಡು ಬರಲು ಅಗತ್ಯ ಕ್ರಮ ಕೈಗೊಳ್ಳಬೇಕಾಗಿದೆ. ಉದ್ಯಮದಾರರಿಗೆ ಸರ್ಕಾರ ಎಲ್ಲಾ ರೀತಿಯ ಬೆಂಬಲ ನೀಡಲಿದೆ. ಇದಕ್ಕಾಗಿ ಎರಡು ಅಭಿಯಾನಗಳನ್ನು ರೂಪಿಸಲಾಗಿದೆ. ತಯಾರಿಕೆ ಜೊತೆಗೆ ಸಂಶೋಧನೆ ಮತ್ತು ಅಭಿವೃದ್ಧಿಗೆ ಆದ್ಯ ಗಮನ ನೀಡಲಾಗಿದೆ. ಪಿಎಂ ವಿಶ್ವಕರ್ಮ ಯೋಜನೆಯಡಿ ಉದ್ಯೋಗವಕಾಶ ಸೃಷ್ಟಿಗೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

**<><*<><>*><>**

ನವದೆಹಲಿಯ ಭಾರತೀಯ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಸಂಸ್ಥೆಯಲ್ಲಿ ಭಾರತೀಯ ಚುನಾವಣಾ ಆಯೋಗ ಏರ್ಪಡಿಸಿರುವ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮಾವೇಶಕ್ಕೆ ಇಂದು ಚಾಲನೆ ದೊರೆಯಿತು. ಜ್ಞಾನೇಶ್ ಕುಮಾರ್ ಅವರು ದೇಶದ ಮುಖ್ಯ ಚುನಾವಣಾ ಆಯುಕ್ತರಾಗಿ ಅಧಿಕಾರವಹಿಸಿಕೊಂಡ ನಂತರ ಈ ರೀತಿಯ ಸಮಾವೇಶ ಇದೇ ಮೊದಲ ಬಾರಿಗೆ ನಡೆಯುತ್ತಿದೆ.  ಜ್ಞಾನೇಶ್ ಕುಮಾರ್ ಅವರೊಂದಿಗೆ, ಚುನಾವಣಾ ಆಯುಕ್ತರಾದ ಡಾ.ಸುಖಬೀರ್ ಸಿಂಗ್ ಸಂಧು ಹಾಗೂ ಡಾ.ವಿವೇಕ್ ಜೋಶಿ, ಜಾರಿಯಲ್ಲಿರುವ ಕಾನೂನು ಚೌಕಟ್ಟಿನೊಳಗೆ ಚುನಾವಣೆ ನಿರ್ವಹಣೆಯಲ್ಲಿ ಸುಧಾರಣೆ ತರಲು ಪೂರಕವಾಗುವ ವಿವಿಧ ವಿಷಯಗಳ ಕುರಿತು ಮುಖ್ಯ ಚುನಾವಣಾಧಿಕಾರಿಗಳೊಂದಿಗೆ ಸಂವಾದ ನಡೆಸಿದರು.  ಈ ವೇಳೆ ಮಾತನಾಡಿದ ಜ್ಞಾನೇಶ್ ಕುಮಾರ್, ದೇಶಾದ್ಯಂತ ಎಲ್ಲಾ ಚುನಾವಣಾಧಿಕಾರಿಗಳು ಮತಗಟ್ಟೆ ಅಧಿಕಾರಿ ಸೇರಿದಂತೆ ಎಲ್ಲ ಸಿಬ್ಬಂದಿ ಪಾರದರ್ಶಕವಾಗಿ ಕಾರ್ಯ ನಿರ್ವಹಿಸಿ, ಎಲ್ಲ ಶಾಸನಬದ್ಧ ಜವಬ್ದಾರಿಗಳನ್ನು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟಿನ ಪ್ರಕಾರ ಪೂರೈಸಬೇಕು. ಆಯೋಗದ ನಿಯಮಾವಳಿಗಳಲ್ಲಿ ತಿಳಿಸಿರುವಂತೆ ಅಧಿಕಾರಿಗಳು ತಮ್ಮ ಪಾತ್ರ ಮತ್ತು ಜವಬ್ದಾರಿಗಳನ್ನು ಮನದಟ್ಟು ಮಾಡಿಕೊಂಡಿರಬೇಕು ಎಂದರು. ಮುಖ್ಯ ಚುನಾವಣಾಧಿಕಾರಿಗಳು, ಚುನಾವಣಾ ಮತಗಟ್ಟೆ ಅಧಿಕಾರಿ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಎಲ್ಲಾ ಹಂತಗಳಲ್ಲಿ ಸರ್ವಪಕ್ಷಸಭೆಗಳನ್ನು ನಡೆಸಿ, ಎದುರಾಗುವ ಸಮಸ್ಯೆಗಳನ್ನು ಶಾಸನಬದ್ಧ ಚೌಕಟ್ಟಿನೊಳಗೆ ಪರಿಹರಿಸಬೇಕು ಎಂದು ಹೇಳಿದರು. ಎರಡು ದಿನಗಳ ಈ ಸಮಾವೇಶ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ ಚುನಾವಣಾಧಿಕಾರಿಗಳು ಚುನಾವಣಾ ವ್ಯವಸ್ಥೆ ಬಗ್ಗೆ ಹೆಚ್ಚಿನ ಮಾಹಿತಿ ಮತ್ತು ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಲು ವೇದಿಕೆಯಾಗಿ ರೂಪುಗೊಳ್ಳಲಿದೆ.  ಸಮಾವೇಶ ಸಂದರ್ಭದಲ್ಲಿ ಮಾಹಿತಿ ತಂತ್ರಜ್ಞಾನ ಮೂಲಸೌಕರ್ಯ, ಪರಿಣಾಮಕಾರಿ ಸಂವಹನ, ಸಾಮಾಜಿಕ ಮಾಧ್ಯಮ ನಿರ್ವಹಣೆ ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಅಧಿಕಾರಿಗಳಿಗಿರುವ ಶಾಸನಬದ್ಧ ಅಧಿಕಾರ ಮತ್ತಿತರ ವಿಚಾರಗಳು ಚರ್ಚೆಗೆ ಬರಲಿವೆ.

**<><*<><>*><>**

ವಿದ್ಯಾರ್ಥಿಗಳು ಯಾವಾಗಲೂ 'ರಾಷ್ಟ್ರ ಮೊದಲು' ಎಂಬ ಮನಸ್ಥಿತಿಯೊಂದಿಗೆ ನಿಗದಿತ ಗುರಿ ಸಾಧನೆಗೆ ಬದ್ಧರಾಗಿರಬೇಕು ಎಂದು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಡೆದ ಭಾರತೀಯ ಸಮೂಹ ಸಂವಾಹನ ಸಂಸ್ಥೆ- ಐಐಎಂಸಿಯ ೫೬ ನೇ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವರು, ಇಂದು ಇಡೀ ಮಾಧ್ಯಮ ಜಗತ್ತು ಬದಲಾಗುತ್ತಿದೆ. ಐಐಎಂಸಿಯನ್ನು ಅತ್ಯಾಧುನಿಕ ಸೌಲಭ್ಯಗಳೊಂದಿಗೆ ವಿಶ್ವ ದರ್ಜೆಯ ಮಾಧ್ಯಮ ಸಂಸ್ಥೆಯನ್ನಾಗಿ ಮಾಡಲಾಗುವುದು ಎಂದರು. ಇದೇ ವೇಳೆ ಸಚಿವರು, ೨೦೨೪-೨೫ ಬ್ಯಾಚ್‌ನ ೪೭೮ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಡಿಪ್ಲೊಮಾವನ್ನು ಪ್ರದಾನ ಮಾಡಿದರು.

**<><*<><>*><>**

ಭಾರತ, ಜಾಗತಿಕ ಹಸಿವು ನೀಗಿಸುವ ಸಾಮರ್ಥ್ಯ ಹೊಂದಿದ್ದು, ಈ ಕುರಿತಂತೆ ದೇಶದಲ್ಲಿ ಪರಿಸರ ವ್ಯವಸ್ಥೆ ಸ್ಥಾಪಿಸಲು ಸರ್ಕಾರ ಕಾರ್ಯೋನ್ಮುಖವಾಗಿದೆ ಎಂದು ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ಹೇಳಿದ್ದಾರೆ. ನವದೆಹಲಿಯ ಭಾರತ ಮಂಟಪಂನಲ್ಲಿಂದು '೪ನೇ ಆವೃತ್ತಿಯ ಅಂತಾರಾಷ್ಟ್ರೀಯ ಆಹಾರ ಮತ್ತು ಆತಿಥ್ಯ ಮೇಳ ಆಹಾರ್' ನ ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ವಿಶ್ವದ ಪ್ರತಿಯೊಂದು ಆಹಾರ ಮಾರುಕಟ್ಟೆಯಲ್ಲಿ ಭಾರತದ ಕನಿಷ್ಟ ಒಂದು ಆಹಾರ ಪದಾರ್ಥ ಇರಲಿದೆ. ಭಾರತದ ಈ ಧ್ಯೇಯದ ಸಾಕಾರಕ್ಕೆ ಎಲ್ಲಾ ಪಾಲುದಾರರ ಸಹಕಾರ ಅಗತ್ಯ ಎಂದು ಹೇಳಿದರು.   ಬಳಿಕ ಮಾತನಾಡಿದ ಭಾರತ ವ್ಯಾಪಾರ ಪ್ರಚಾರ ಸಂಸ್ಥೆಯ ಅಧ್ಯಕ್ಷ ಪ್ರದೀಪ್ ಸಿಂಗ್ ಕರೋಲಾ, ಈ ವರ್ಷ ೨೨ ದೇಶಗಳ ಪ್ರದರ್ಶಕರು ಸೇರಿದಂತೆ ೧ ಸಾವಿರದ ೭೦೦ ಕ್ಕೂ ಹೆಚ್ಚು ಪ್ರದರ್ಶಕರು ಮೇಳದಲ್ಲಿ ಭಾಗವಹಿಸಿದ್ದಾರೆ. ಐದು ದಿನಗಳ ಈ ಮೇಳಕ್ಕೆ ೧ ಲಕ್ಷಕ್ಕೂ ಹೆಚ್ಚು ಜನರು ಭೇಟಿ ನೀಡುವ ನಿರೀಕ್ಷೆ ಇದೆ ಎಂದು ತಿಳಿಸಿದರು.

**<><*<><>*><>**

ಬೆಲ್ಜಿಯಂನ ರಾಜಕುಮಾರಿ ಆಸ್ಟ್ರಿಡ್, ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ವ್ಯಾಪಾರ, ತಂತ್ರಜ್ಞಾನ, ರಕ್ಷಣೆ, ಕೃಷಿ, ನಾವೀನ್ಯತೆ, ಕೌಶಲ್ಯ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಪಾಲುದಾರಿಕೆ ಮೂಲಕ ಭಾರತ-ಬೆಲ್ಜಿಯಂ ದೇಶವಾಸಿಗಳಿಗೆ ಅಪರಿಮಿತ ಅವಕಾಶಗಳ ಅನ್ವೇಷಣೆಗೆ ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ.

**<><*<><>*><>**

೨೦೫೦ರ ವೇಳೆಗೆ ವೃತ್ತಾಕಾರದ ಆರ್ಥಿಕತೆ ಎರಡು ಟ್ರಿಲಿಯನ್ ಡಾಲರ್‌ಗಿಂತಲೂ ಹೆಚ್ಚು ಮಾರುಕಟ್ಟೆ ಮೌಲ್ಯವನ್ನು ಹಾಗೂ ೧೦ ದಶಲಕ್ಷ ಉದ್ಯೋಗಳನ್ನು ಸೃಷ್ಟಿಸುವ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ತಿಳಿಸಿದ್ದಾರೆ. ರಾಜಸ್ಥಾನದ ಜೈಪುರದಲ್ಲಿ ನಡೆಯುತ್ತಿರುವ ಮೂರು ದಿನಗಳ ಏಷ್ಯಾ-ಪೆಸಿಫಿಕ್‌ನಲ್ಲಿನ ೧೨ನೇ ಪ್ರಾದೇಶಿಕ ೩-ಆರ್ ಮತ್ತು ವೃತ್ತಾಕಾರದ ಆರ್ಥಿಕ ವೇದಿಕೆಯನ್ನುದ್ದೇಶಿಸಿ ಮಾತನಾಡಿದ ಅವರು, ಭಾರತದ ವೃತ್ತಾಕಾರದ ಆರ್ಥಿಕತೆಯ ಧ್ಯೇಯಕ್ಕೆ ತ್ಯಾಜ್ಯ ಹಾಗೂ ಮಾಲಿನ್ಯ ತೊಡೆದು ಹಾಕುವುದು, ಉತ್ಪನ್ನ ಹಾಗೂ ವಸ್ತುಗಳ ಪ್ರಸಾರ ಮತ್ತು ಪ್ರಕೃತಿಯ ಮರುಸ್ಥಾಪನೆ ಮೂರು ಆಧಾರಸ್ತಂಭಗಳಾಗಿವೆ. ಸರ್ಕಾರ ಸಕ್ರಿಯವಾಗಿ ನೀತಿಗಳನ್ನು ರೂಪಿಸುತ್ತಿದ್ದು, ಈ ಧ್ಯೇಯದೊಂದಿಗೆ ಮುನ್ನಡೆಯುತ್ತಿದೆ ಎಂದು ಹೇಳಿದರು. "ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವ ಹಾಗೂ ಇಂಗಾಲ ಹೊರಸೂಸುವಿಕೆ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಸಮಾಜಗಳನ್ನು ಜಾಗೃತಗೊಳಿಸುವುದು" ಈ ಕಾರ್ಯಕ್ರಮದ ಧ್ಯೇಯ ವಾಕ್ಯವಾಗಿದೆ.

**<><*<><>*><>**

ಜನೌಷಧಿ ಕೇಂದ್ರಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಅಭಿಯಾನ ನಡೆಸುತ್ತಿದೆ ಎಂದು ನೀತಿ ಆಯೋಗದ ಸದಸ್ಯ ವಿ.ಕೆ.ಪಾಲ್ ಹೇಳಿದ್ದಾರೆ. ಮುಂಬರುವ ಜನೌಷಧಿ ದಿವಸ್ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನೌಷಧಿ ಕೇಂದ್ರಗಳಲ್ಲಿ ಸುಮಾರು ಎರಡು ಸಾವಿರ ಔಷಧಿಗಳು ಮತ್ತು ಮುನ್ನೂರು ಶಸ್ತ್ರಚಿಕಿತ್ಸಾ ಉಪಕರಣಗಳು ಲಭ್ಯವಿದೆ. ಜನರಿಗೆ ಕೈಗೆಟುಕುವ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಔಷಧವನ್ನು ಒದಗಿಸುವುದು ಈ ಮಳಿಗೆಗಳ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದರು.

**<><*<><>*><>**

ನವದೆಹಲಿಯ ಭಾರತ್ ಮಂಟಪದಲ್ಲಿಂದು ನಡೆದ 'ರಾಷ್ಟ್ರೀಯ ಆರೋಗ್ಯ ಮಿಷನ್- ಎನ್‌ಎಚ್‌ಎಂ' ನ ಯೋಜನಾ ಗುಂಪಿನ ೯ನೇ ಸಭೆಯ ಅಧ್ಯಕ್ಷತೆಯನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ವಹಿಸಿದ್ದರು.

**<><*<><>*><>**

ದುಬೈನಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯ ಮೊದಲ ಸೆಮಿ ಫೈನಲ್ ಪಂದ್ಯದಲ್ಲಿ ಭಾರತ-ಆಸ್ಟ್ರೇಲಿಯಾ ಮುಖಾಮುಖಿಯಾಗಿವೆ. ಟಾಸ್ ಗೆದ್ದು, ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ತಂಡ ೪೯.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೬೪ ರನ್ ಗಳಿಸಿತು. ೨೬೫ ರನ್‌ಗಳ ಗುರಿ ಬೆನ್ನತ್ತಿರುವ ಭಾರತ, ಇತ್ತೀಚಿನ ವರದಿಯಂತೆ ೧೯ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೯೩ ರನ್ ಮಾಡಿ ಆಡುತ್ತಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**